ತಂತಿ ವಿಳಾಸ: ಯೂನಿರಿಜ್
ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301

e-mail: Registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಎಸಿ4/42/2016-17

ದಿನಾಂಕ: 08-03-2017

## ಸುತ್ತೋಲೆ

**ವಿಷಯ:** 2016-17ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಕೋರ್ಸಿಗೆ ಪ್ರವೇಶಾತಿಯಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ (SC/ST) ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಪಾವತಿಸುವ ಬಗ್ಗೆ.

*****

2016-17ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಕೋರ್ಸಿಗೆ ಪ್ರವೇಶಾತಿಯಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ (SC/ST) ವಿದ್ಯಾರ್ಥಿಗಳ ಪ್ರವೇಶ ಶುಲ್ಕ ಮತ್ತು ಇತರೆ ಶುಲ್ಕಗಳು ಸರ್ಕಾರದ ಸಂಬಂಧಪಟ್ಟ ಇಲಾಖೆಯಿಂದ ಮರುಭರಿಕೆಯಾಗಿದ್ದರೂ ಸಹ ಕೆಲವು ಕಾಲೇಜಿನವರು ಇದುವರೆವಿಗೂ ವಿಶ್ವವಿದ್ಯಾನಿಲಯ ಖಾತೆಗೆ ಜಮಾ ಮಾಡದೆ ಇರುವುದು ವಿಶ್ವವಿದ್ಯಾನಿಲಯದ ಗಮನಕ್ಕೆ ಬಂದಿದ್ದು, ಈ ಸಂಬಂಧ, ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಯಪಡಿಸುವುದೇನೆಂದರೆ, 2016-17ನೇ ಶೈಕ್ಷಣಿಕ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ (SC/ST) ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ಈಗಾಗಲೇ ವಿಶ್ವವಿದ್ಯಾನಿಲಯಕ್ಕೆ ಪಾವತಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳ ವಿವರ ಮತ್ತು ಚಲನ್ ಪ್ರತಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕಾಗಿಯೂ, ಸರ್ಕಾರದಿಂದ ಮರುಭರಿಕೆಯಾಗಿ ಶುಲ್ಕ ಪಾವತಿಸದಂತಹ ಕಾಲೇಜುಗಳ ಪ್ರಾಂಶುಪಾಲರುಗಳು ತಕ್ಷಣ ಶುಲ್ಕ ಪಾವತಿಸಿ ಮೂಲ ಚಲನ್ ಪ್ರತಿ ಮತ್ತು ವಿದ್ಯಾರ್ಥಿಗಳ ವಿವರಗಳನ್ನು ದಿನಾಂಕ:31-03-2017ರೊಳಗೆ, ಈ ಕಛೇರಿಗೆ ಸಲ್ಲಿಸುವುದು. ಇಲ್ಲವಾದಲ್ಲಿ, ಅಂತಹ ಕಾಲೇಜಿನ April/May 2017ರ ಪರೀಕ್ಷಾ ಫಲಿತಾಂಶವನ್ನು ತಡೆಹಿಡಿಯಲಾಗುವುದೆಂದು ಈ ಮೂಲಕ ತಿಳಿಸಿದೆ. ಜೊತೆಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಿದ ಇಲಾಖೆಗಳಿಗೆ ಅಂತಹ ಕಾಲೇಜುಗಳ ಮೇಲೆ ಶಿಸ್ತುಕ್ರಮ ಜರುಗಿಸಲು ಶಿಫಾರಸ್ಸು ಮಾಡಲಾಗುವುದು.

**ಮೇಲಿನ ಸೂಚನೆಯನ್ನು ಕಾಲೇಜು/ಸಂಸ್ಥೆಯವರು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.**

ಕುಲಸಚಿವರಿಂದ
ಅನುಮೋದಿಸಿದೆ.

ಉಪ ಕುಲಸಚಿವ(ಶೈಕ್ಷಣಿಕ)

08/3/17

**ಇವರಿಗೆ:**

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ಬಿ.ಎ./ಬಿ.ಪಿ.ಎ./ಬಿ.ಸಿ.ಎಸ್/ಬಿ.ಎಸ್‌ಸಿ./ ಬಿ.ಕಾಂ./ ಬಿ.ಬಿ.ಎಂ./ ಬಿ.ಟಿ.ಹೆಚ್./ ಬಿ.ಎಸ್.ಡಬ್ಲ್ಯೂ./ ಬಿ.ಫೈನ್.ಆರ್ಟ್ಸ್/ ಬಿ.ಎ.(ಪ್ರದರ್ಶನ ಕಲೆ)/ ಬಿ.ಎಸ್ಸಿ.(ವಾಕ್ ಮತ್ತು ಶ್ರವಣ) ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-**ಸೂಕ್ತ ಕ್ರಮಕ್ಕಾಗಿ.**
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು - **ಮಾಹಿತಿಗಾಗಿ.**
4. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ಅಂತರಾಷ್ಟ್ರೀಯ ಕೇಂದ್ರ, ಲಲಿತ ಕಲೆಗಳ ಕಾಲೇಜು ಆವರಣ, ಮಾ.ಗಂ., ಮೈಸೂರು.
7. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
8. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಮೈಸೂರು ವಲಯ, ವಿನೋಬ/ಹುಣಸೂರು ರಸ್ತೆ, ಮೈಸೂರು.
9. ಪ್ರೊ.ಜಿ.ಹೇಮಂತ್ ಕುಮಾರ್, ಸಂಯೋಜಕರು, ಐ.ಸಿ.ಡಿ ವಿಭಾಗ, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾ.ಗಂ., ಮೈಸೂರು-**ಮೈ.ವಿ.ವಿ.ನಿಲಯ ವೆಬ್‌ಸೈಟ್‌ನಲ್ಲಿ ಪ್ರಕಟಣೆ ಮಾಡಬೇಕಾಗಿ ಕೋರಿದೆ.**
10. ಉಪ ಕುಲಸಚಿವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ವಿಶೇಷ ಘಟಕ, ಶತಮಾನೋತ್ಸವ ಭವನ, ಮೈ.ವಿ.ವಿ.ನಿಲಯ, ಮೈಸೂರು.
11. ಆಡಳಿತ ಶಾಖೆ/ಪರೀಕ್ಷಾಂಗ ವಿಭಾಗದ ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು/ಶೈಕ್ಷಣಿಕ ವಿಭಾಗದ ಎಲ್ಲಾ ವಿಷಯ ನಿರ್ವಾಹಕರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಮಾನ್ಯ ಕುಲಪತಿ/ ಕುಲಸಚಿವ/ ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.